ಬೈಲಹೊಂಗಲ ತಾಲ್ಲೂಕಿನ ದೊಡವಾಡ ಗ್ರಾಮದ ಪೊಲೀಸ್ ಠಾಣೆಯ ಕಟ್ಟಡ ಹಾಗೂ ಸಿಬ್ಬಂದಿಗಳಿಗೆ ವಸತಿ ಗೃಹ ಒದಗಿಸುವುದು

2599(3427) ಶ್ರೀ ಕೌಜಲಗಿ ಮಹಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ದೊಡವಾಡ ಗ್ರಾಮದಲ್ಲಿರುವ ಪೊಲೀಸ್ ಠಾಣೆಗೆ ಸ್ವತಂತ್ರವಾದ ಕಟ್ಟಡ ಹಾಗೂ ಅಲ್ಲಿನ ಸಿಬ್ಬಂದಿಗೆ ವಸತಿ ಗೃಹಗಳು ಇಲ್ಲದೆ ಇರುವ ಸಂಗತಿ ಸರ್ಕಾರದ ಗಮನಕ್ಕೆ ಬಂದಿದೆಯೆ;

ಆ) ಬಂದಿದ್ದರೆ, ಠಾಣೆಗೆ ಸ್ವತಂತ್ರವಾದ ಕಟ್ಟಡ ಹಾಗೂ ಸಿಬ್ಬಂದಿಗಳಿಗೆ ವಸತಿ ಗೃಹಗಳನ್ನು ಕಟ್ಟಲು ಯಾವ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಗೃಹ ಸಚಿವರು) :

ಅ) ಬಂದಿರುತ್ತದೆ.

ಆ) ಪೊಲೀಸ್ ಠಾಣಾ ಮತ್ತು ವಸತಿ ಗೃಹಗಳನ್ನು ಕಟ್ಟಲು ನಿವೇಶನವನ್ನು ನೀಡಲು ಬೆಳಗಾವಿ ಜಿಲ್ಲಾಧಿಕಾರಿಯವರನ್ನು ಕೋರಲಾಗಿದೆ. ನಿವೇಶನಗಳು ದೊರಕಿದ ನಂತರ ಕಟ್ಟಡಗಳನ್ನು ಕಟ್ಟಲಾಗುವುದು.

ಬೆಳಗಾವಿ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಹೊಸದಾಗಿ ಕೆಲಸಗಳನ್ನು ತೆಗೆದುಕೊಳ್ಳುವುದು

2600(3428) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಗೃಹ ಮತ್ತು ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಎಷ್ಟು ಹೊಸ ಕೆಲಸಗಳನ್ನು ತೆಗೆದುಕೊಳ್ಳಬೇಕೆಂದು ಉದ್ದೇಶಿಸಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು);

ಆ) ಬೈಲಹೊಂಗಲ ಹಾಗೂ ಸವದತ್ತಿ ತಾಲ್ಲೂಕುಗಳಲ್ಲಿ ಸಣ್ಣ ನೀರಾವರಿ ಇಲಾಖೆಯಿಂದ ಎಷ್ಟು ಕೆಲಸಗಳನ್ನು ತೆಗೆದುಕೊಳ್ಳಲು ಸರ್ವೆ ಮಾಡಲಾಗುತ್ತಿದೆ;

ಇ) ಇಲ್ಲದಿದ್ದಲ್ಲಿ, ಕಾರಣವೇನು; ಹಾಗೂ ಸರ್ವೆ ಮಾಡಲು ಕ್ರಮಕೈಗೊಳ್ಳಲಾಗುವುದೇ?

ಶ್ರೀ ಎಂ. ಮಲ್ಲಿಕಾರ್ಜುನ ಖರ್ಗೆ (ಗೃಹ ಮತ್ತು ಸಣ್ಣ ನೀರಾವರಿ ಸಚಿವರು) :

ಅ) ಬೆಳಗಾಂ ಜಿಲ್ಲೆಯಲ್ಲಿ 35 ಹೊಸ ಕೆರೆಗಳನ್ನು ನಿರ್ಮಿಸಲು ಉದ್ದೇಶಿಸಲಾಗಿದೆ. ತಾಲ್ಲೂಕುವಾರು ವಿವರ ಈ ಕೆಳಕಂಡಂತಿದೆ.

ತಾಲ್ಲೂಕು	ಕೆಲಸಗಳ ಸಂಖ್ಯೆ	ಅಂದಾಜು ಮೊತ್ತ
1	2	3
ಬೆಳಗಾಂ	2	57.00
ಹುಕ್ಕೇರಿ	5	108.75
ಬೈಲಹೊಂಗಲ್	2	20.00

1	2	3
ಖಾನಾಪೂರ	4	60.00
ರಾಮದುರ್ಗ	2	7.00
ಸವದತ್ತಿ	5	86.00
ಗೋಕಾಕ	4	100.34
ಚಿಕ್ಕೋಡಿ	7	65.00
ಅಥಣಿ	3	56.00
ರಾಯಭಾಗ	1	28.09
	35	**588.18**

ಆ) ಮತ್ತು ಇ) ಬೈಲ ಹೊಂಗಲ ತಾಲ್ಲೂಕಿನಲ್ಲಿ 2002–03ನೇ ಸಾಲಿನಲ್ಲಿ 2 ಕೆಲಸಗಳನ್ನು ಕೈಗೊಳ್ಳಲು ಉದ್ದೇಶಿಸಿದ್ದು ಸರ್ವೆ ಕೆಲಸ ಪೂರ್ಣಗೊಂಡಿದೆ. ಇದರಲ್ಲಿ ಒಂದು ಕೆಲಸವನ್ನು ರೈತ ಕಾಯಕ ಕೆರೆ ಯೋಜನೆ ಅಡಿಯಲ್ಲಿ ಪ್ರಾರಂಭಿಸಲಾಗಿದೆ. ಸವದತ್ತಿ ತಾಲ್ಲೂಕಿನಲ್ಲಿ 2002–03ನೇ ಸಾಲಿಯ76ನಲ್ಲಿ 5 ಕೆಲಸಗಳನ್ನು ತೆಗೆದುಕೊಳ್ಳಲು ಉದ್ದೇಶಿಸಿದ್ದು, ಇದರಲ್ಲಿ 4 ಕೆಲಸಗಳ ಸರ್ವೆ ಕಾರ್ಯ ಪೂರ್ಣಗೊಂಡಿದೆ. ಇನ್ನೊಂದು ಕಾಮಗಾರಿಯನ್ನು ರೈತ ಕಾಯಕ ಕರೆ ಯೋಜನೆಯಡಿ ತೆಗೆದುಕೊಂಡಿದ್ದರಿಂದ ಸರ್ವೆಕಾರ್ಯ ಕೈಬಿಡಲಾಗಿದೆ.

ರಾಜ್ಯದಲ್ಲಿ ಕೆ.ಎಸ್.ಆರ್.ಟಿ.ಸಿ.ಯ ಲಾಭ ಮತ್ತು ಹಾನಿ

2601(3429) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಕೆ.ಎಸ್.ಆರ್.ಟಿ.ಸಿ.ಯ ಘಟಕಗಳು ಇರುತ್ತವೆ;

ಆ) ಅವುಗಳಲ್ಲಿ ಎಷ್ಟು ಘಟಕಗಳು ಲಾಭದಲ್ಲಿರುತ್ತವೆ ಹಾಗೂ ಎಷ್ಟು ಘಟಕಗಳು ನಷ್ಟದಲ್ಲಿರುತ್ತವೆ;

ಇ) ನಷ್ಟದಲ್ಲಿರುವ ಘಟಕಗಳನ್ನು ಲಾಭದಾಯಕವನ್ನಾಗಿ ಮಾಡಲು ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಬಿ. ರಮಾನಾಥ ರೈ (ಸಾರಿಗೆ ಸಚಿವರು) :

ಅ)

ಸಾರಿಗೆ ಸಂಸ್ಥೆಯ ಒಟ್ಟು ಘಟಕಗಳು

1)	ಕ.ರಾ.ರ.ಸಾ.ಸಂ.	–	48
2)	ಬೆ.ಮ.ನ.ಸಾ.ಸಂ.	–	20
3)	ವಾ.ಕ.ರ.ಸಾ.ಸಂ.	–	46
4)	ಈ.ಕ.ರ.ಸಾ.ಸಂ.	–	27
	ಒಟ್ಟು	–	**141**